# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 777
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು ಶ್ರೀ ಯು.ಬಿ.ವೆಂಕಟೇಶ್
ಉತ್ತರಿಸಬೇಕಾದ ದಿನಾಂಕ 4/03/2021.
ಉತ್ತರಿಸುವ ಸಚಿವರು ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕರ್ನಾಟಕ ಲೋಕಸೇವಾ ಆಯೋಗವು ಸದಾ ಒಂದಿಲ್ಲೊಂದು ಹಗರಣಗಳಲ್ಲಿ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಕರ್ನಾಟಕ ಲೋಕಸೇವಾ ಆಯೋಗದ ಬಗ್ಗೆ ಸರ್ಕಾರದಲ್ಲಿ ಕೆಲವು ದೂರುಗಳು ಸ್ವೀಕೃತವಾಗಿವೆ. |
| ಆ) | ರಾಜ್ಯ ಸರ್ಕಾರಕ್ಕೆ ಕರ್ನಾಟಕ ಲೋಕಸೇವಾ ಆಯೋಗದ ಮೇಲೆ ಇರುವ ನಿಯಂತ್ರಣಗಳೇನು; | ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುವಂತೆ ಆಯೋಗವು ಒಂದು ಸಂವಿಧಾನಾತ್ಮಕ ಸಂಸ್ಥೆಯಾಗಿದ್ದರೂ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆಮತ್ತು ನಿಯಮಗಳನ್ವಯ ಕಾರ್ಯನಿರ್ವಹಿಸುತ್ತದೆ ಮತ್ತು ಭಾರತದ ಸಂವಿಧಾನದ ಅನುಚ್ಛೇದ 318, 320 ಮತ್ತು 321 ರಂತೆ ಲೋಕಸೇವಾ ಆಯೋಗದ ಕಾರ್ಯ ನಿರ್ವಹಣೆಯ ಮೇಲೆ ಸರ್ಕಾರಕ್ಕೆ ನಿಯಂತ್ರಣವನ್ನು ಪ್ರತ್ಯಾಯೋಜಿಸಲಾಗಿದೆ. |
| ಇ) | ಕರ್ನಾಟಕ ಲೋಕಸೇವಾ ಆಯೋಗವು ಕಳಂಕರಹಿತವಾಗಿ ನಡೆಯುವಂತಾಗಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | ಈಗಾಗಲೇ ಪಿ.ಸಿ.ಹೋಟಾ ಸಮಿತಿಯ ಶಿಫಾರಸ್ಸಿನನ್ವಯ ಸುಧಾರಣೆಗಳನ್ನು ಜಾರಿಗೆ ತರಲಾಗಿದ್ದು, ಹಾಲಿಯಿರುವ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತಗೊಳಿಸುವ ಸಲುವಾಗಿ ನಿಯಮಗಳಿಗೆ ತಿದ್ದುಪಡಿ ತರಲಾಗಿದೆ. |

**ಸಂಖ್ಯೆ:ಸಿಆಸುಇ 54 ಎಸ್‌ಎಲ್‌ಎ 2021**

ಬಿ.ಎಸ್. ಯಡಿಯೂರಪ್ಪ

**(ಬಿ.ಎಸ್ ಯಡಿಯೂರಪ್ಪ)**
**ಮುಖ್ಯಮಂತ್ರಿ**